ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು-560001.

ಸಂಖ್ಯೆ: ಕಾಶಿಇ/ಶೈವಿ/203/ಕೌಶಲ್ಯಾಭಿವೃದ್ಧಿ/2022-23 ದಿನಾಂಕ: 17.02.2023

# ಸುತ್ತೋಲೆ

ವಿಷಯ: ಯುವ ಸಮೃದ್ಧಿ ಸಮ್ಮೇಳನದ ರಾಜ್ಯಮಟ್ಟದ ಬೃಹತ್ ಉದ್ಯೋಗ ಮೇಳದ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು / ಅಭ್ಯರ್ಥಿಗಳು ನೋಂದಣಿ ಹಾಗೂ ಪಾಲ್ಗೊಳ್ಳುವ ಬಗ್ಗೆ.

ಉಲ್ಲೇಖ: ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ, ರವರ ಪತ್ರ ಸಂಖ್ಯೆ:ಕೆಎಸ್‌ಡಿಸಿ/ಉಮೇ/ವಿವ-42/2023-24 ದಿನಾಂಕ:06.02.2024.

* * * * * *

ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ ರವರ ಸೂಚನೆಯ ಮೇರೆಗೆ ಮಾನ್ಯ ಸಚಿವರು, ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಅವರ ಅಧ್ಯಕ್ಷತೆಯ ಸಭೆಯಲ್ಲಿ ನಿರ್ಣಯಿಸಿಲಾಗಿರುವಂತೆ ಬೆಂಗಳೂರು ನಗರ ಜಿಲ್ಲೆಯ ಅರಮನೆ ಮೈದಾನದಲ್ಲಿ ದಿನಾಂಕ:26.02.2024 ಮತ್ತು 27.02.2024 ರಂದು ರಾಜ್ಯ ಮಟ್ಟದ ಬೃಹತ್ ಉದ್ಯೋಗ ಮೇಳವನ್ನು ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದಿಂದ ಆಯೋಜಿಸಲು ತೀರ್ಮಾನಿಸಲಾಗಿರುತ್ತದೆ.

ಯುವ ಸಮೃದ್ಧಿ ಸಮ್ಮೇಳನವಾದ ಈ ರಾಜ್ಯ ಮಟ್ಟದ ಬೃಹತ್ ಉದ್ಯೋಗ ಮೇಳದ ಕಾರ್ಯಕ್ರಮದಲ್ಲಿ ರಾಜ್ಯದ ಯುವ ಜನತೆಗೆ ಹಾಗೂ ಉದ್ಯೋಗಾಕಾಂಕ್ಷಿಗಳಿಗೆ ಉಪಯುಕ್ತವಾಗುವಂತೆ ಹಾಗೂ ರಾಜ್ಯದ ಆಸಕ್ತ ಯುವಜನತೆಯು ಸ್ವಯಂ ಉದ್ಯೋಗಿಗಳಾಗಲು / ಸ್ವಾವಲಂಬಿಗಳಾಗಲು ಅರಿವು ಮೂಡಿಸಿ, ಪ್ರೇರೇಪಿಸಿ, ಜೀವನದಲ್ಲಿ ಭರವಸೆಯ ಬೆಳಕು ಮೂಡಿಸುವ ಉದ್ದೇಶದಿಂದ ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳು / ಪ್ಲೇಸ್‌ಮೆಂಟ್‌ಸೆಲ್ ಅಧಿಕಾರಿಗಳು ಸೂಚನಾ ಫಲಕದಲ್ಲಿ ಪ್ರಕಟಿಸಿ ಅಂತಿಮ ವರ್ಷದ ವಿದ್ಯಾರ್ಥಿಗಳು ಹಾಗೂ ಪದವಿ ಮುಗಿಸಿ ಹೊರಗುಳಿದಿರುವ ವಿದ್ಯಾರ್ಥಿಗಳು ಈ ಮೇಳದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಇದರ ಪ್ರಯೋಜನ ಪಡೆದುಕೊಳ್ಳಲು ಅನುವಾಗುವಂತೆ ಸೂಕ್ತ ಕ್ರಮ ತೆಗೆದುಕೊಳ್ಳಲು ಸೂಚಿಸಲಾಗಿದೆ.

ವಿ.ಸೂಚನೆ: ಮೇಲ್ಕಂಡ ಉದ್ಯೋಗ ಮೇಳದಲ್ಲಿ ಭಾಗವಹಿಸಲು ಇಚ್ಛಿಸುವ ವಿದ್ಯಾರ್ಥಿಗಳು ಕರ್ನಾಟಕ ಸ್ಕಿಲ್ ಕನೆಕ್ಟ್ ಪೋರ್ಟಲ್ (https://skillconnect.kaushalkar.com) ನ್ನು ತೆರೆದು ಉದ್ಯೋಗ ಮೇಳ ಐಕಾನ್ ಕ್ಲಿಕ್ ಮಾಡಿ, ಅಭ್ಯರ್ಥಿಗಳ ನೋಂದಣಿ ಐಕಾನ್ ಕ್ಲಿಕ್ ಮಾಡಿ ಅವಶ್ಯ ದಾಖಲಾತಿ / ಮಾಹಿತಿಯನ್ನು ಅಳವಡಿಸುವುದು. ಪದವಿ ಪೂರೈಸದ ವಿದ್ಯಾರ್ಥಿಗಳು ಪದವಿ ಪೂರ್ವ ಅಂಕಪಟ್ಟಿಯನ್ನು ದಾಖಲಿಸುವುದು.

ಹೆಚ್ಚಿನ ಮಾಹಿತಿಗಾಗಿ: 1. ಶ್ರೀಮತಿ ಸುಮತಿ ಬಿ.ಎಸ್., ಕಾರ್ಯನಿರ್ವಾಹಕ ನಿರ್ದೇಶಕರು-3, ಕೆ.ಎಸ್.ಡಿ.ಸಿ. ದೂರವಾಣಿ ಸಂಖ್ಯೆ: 9663451401.
2. ಶ್ರೀ ಮಹೇಶ್ ಎಂ., ದೂರವಾಣಿ ಸಂಖ್ಯೆ: 8152882461

ಆಯುಕ್ತರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಇವರಿಗೆ : ಮಾಹಿತಿ ಹಾಗೂ ಅಗತ್ಯಕ್ರಮಕ್ಕಾಗಿ.

1. ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ / ಪ್ಲೇಸ್‌ಮೆಂಟ್‌ಸೆಲ್ ಅಧಿಕಾರಿಗಳಿಗೆ.

2. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ – ತಮ್ಮ ವ್ಯಾಪ್ತಿಗೆ ಬರುವ ಖಾಸಗಿ ಅನುದಾನಿತ ಕಾಲೇಜುಗಳಿಗೆ ರವಾನಿಸಲು ಸೂಚಿಸಲಾಗಿದೆ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು– ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.

ಪ್ರತಿಯನ್ನು:

4. ಆಯುಕ್ತರ, ನಿರ್ದೇಶಕರ, ಮುಖ್ಯ ಆಡಳಿತಾಧಿಕಾರಿಗಳ, ಹೆಚ್ಚುವರಿ ನಿರ್ದೇಶಕರ ಹಾಗೂ ಜಂಟಿ ನಿರ್ದೇಶಕರುಗಳ ಆಪ್ತ ಶಾಖೆಗೆ, ಕೇಂದ್ರ ಕಛೇರಿ, ಬೆಂಗಳೂರು.
5. ಕಛೇರಿ ಪ್ರತಿ.